# ಬಿಸಿ ಊಟ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದ ಜಿಲ್ಲಾ ಪಂಚಾಯತ ಸಿ.ಇ.ಓ ರಾಹುಲ ಶಿಂಧೆ



ಬೆಳಗಾವಿ.ಏ.26: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಸಿ.ಇ.ಓ. ಆದ ರಾಹುಲ ಶಿಂಧೆ ಅವರು ಗುರುವಾರ (ಏ.25) ರಂದು ಯಮಕನಮರಡಿ ಗ್ರಾಮದಲ್ಲಿನ ಬಿಸಿ ಊಟ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂಧರ್ಭದಲ್ಲಿ ಮಾತನಾಡಿದ ಅವರು ಮಕ್ಕಳಿಗೆ ನೀಡಲಾಗುವ ಊಟವು ಗುಣಮಟ್ಟದಿಂದ ಕೂಡಿರಬೇಕು. ಆಹಾರ ತಯಾರಿಕೆ ಸ್ಥಳದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೇ ನೀಡುವದರ ಜೊತೆಗೆ ಸುರಕ್ಷತೆಯ ಬಗ್ಗೆಯು ಹೆಚ್ಚಿನ ಕಾಳಜಿ ವಹಿಸುವಂತೆ ತಿಳಿಸಿದರು. ತದನಂತರ ಮಕ್ಕಳೊಂದಿಗೆ ಮಾತನಾಡಿ ಪ್ರತಿದಿನ ಒದಗಿಸುವ ಬಿಸಿ ಊಟದ ಗುಣಮಟ್ಟ ಹಾಗೂ ಪ್ರಮಾಣದ ಬಗ್ಗೆ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಪ್ರಧಾನ ಮಂತ್ರಿ ಪೋಳಣ ಶಕ್ತಿ ನಿರ್ಮಾಣ ಅಭಿಯಾನದ ಸಹಾಯಕ ನಿರ್ದೇಶಕಿ ಶ್ರೀಮತಿ ಸವಿತಾ ಹಳಕಿ ಉಪಸ್ಥಿತರಿದ್ದರು.

# ‘ಮನೆ ಮನೆ ಮತದಾನ’ ಕಾರ್ಯ ಆರಂಭ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರಿಂದ ವೀಕ್ಷಣೆ



ಗದಗ ಏ.26;– ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಗದಗ ಜಿಲ್ಲೆಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ಹಾಗೂ ವಿಶೇಷಚೇತನ ಮತದಾರರ ಪೈಕಿ 12 ಡಿ ಮುಖಾಂತರ ಈಗಾಗಲೇ ಅರ್ಜಿ ಸಲ್ಲಿಸಿದವರಿಗೆ ಮನೆಯಲ್ಲಿ0ƒ?? ಮತದಾನ ಮಾಡುವ ಕಾರ್ಯಕ್ಕೆ ಶುಕ್ರವಾರ ಚಾಲನೆ ದೊರೆಯಿತು.

ನಗರದ ಹಲವು ವಾರ್ಡ್‌ಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಭೇಟಿ ನೀಡಿ, ಮನೆ ಮನೆ ಮತದಾನದ ಕಾರ್ಯದ ಬಗ್ಗೆ ಪರಿಶೀಲಿಸಿದರು.

ಈಗಾಗಲೇ ಅರ್ಜಿ ಸಲ್ಲಿಸಿರುವ ಮತದಾರರು, ತಾವು ನೀಡಿದ ವಿಳಾಸದ ಮನೆಯಲ್ಲಿ0ƒ?? ಹಾಜರಿದ್ದು, ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ನಾಗರಿಕರು ಮನೆ ಮನೆಯಲ್ಲಿಯೇ ಹಿರಿಯರಿಗೆ ಮತ ಚಲಾಯಿಸಲು ಅವಕಾಶ ಮಾಡಿರುವುದಕ್ಕೆ ಚುನಾವಣಾ ಆಯೋಗಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ಮನೆಯಲ್ಲಿಯೇ ಮತ ಚಲಾಯಿಸಲು ಅವಕಾಶ ಮಾಡಿರುವುದರಿಂದ ಶೇಕಡವಾರು ಮತದಾನ ಹೆಚ್ಚಳ ಆಗುವುದರ ಜೊತೆಗೆ, ಪ್ರಜಾಪ್ರಭುತ್ವವನ್ನು ಬಲಪಡಿಸಲು ಸಹಕಾರಿ ಆಗಲಿದೆ. ಆ ನಿಟ್ಟಿನಲ್ಲಿ ‘ಮನೆ ಮನೆ ಮತದಾನ’ ಹಿರಿಯರಿಗೆ ಮತ್ತು ವಿಶೇಷಚೇತನರಿಗೆ ಒಂದು ಅವಕಾಶ ಎಂದು ಹಿರಿಯ ನಾಗರಿಕರೊಬ್ಬರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಉಪ ವಿಭಾಗಾಧಿಕಾರಿ ವೆಂಕಟೇಶ್ ನಾ0ಯ್?ಕ, ತಹಶಿಲ್ದಾರರಾದ ಶ್ರೀನವಾಸ ಕುಲಕರ್ಣಿ ಇತರರು ಇದ್ದರು.

# ಮಂಜುನಾಥ ನಗರಕ್ಕೆ ಜಿ.ಪಂ.ಉಪ ಕಾರ್ಯದರ್ಶಿ ಭೇಟಿ ಮತದಾನ ಮಹತ್ವ ಕುರಿತು ಜಾಗೃತಿ



ಗದಗ ಏಪ್ರಿಲ್ :– ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಕಡಿಮೆ ಮತದಾನ ವಾಗಿರುವ ಬೆಟಗೇರಿ ಬಳಿಯ ಮಂಜುನಾಥ ನಗರಕ್ಕೆ ಜಿ.ಪಂ.ಉಪ ಕಾರ್ಯದರ್ಶಿ ಹಾಗೂ ಸ್ವೀಪ್ ಸಮಿತಿ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ.ದೇವರಮನಿ ಅವರು ಗುರುವಾರ ಭೇಟಿ ನೀಡಿ ಮತದಾನ ಮಹತ್ವ ಕುರಿತು ಜಾಗೃತಿ ಮೂಡಿಸಿದರು.

ಮಂಜುನಾಥ ನಗರದ ಮನೆ ಮನೆಗೆ ಭೇಟಿ ನೀಡಿ ಲೋಕಸಭಾ ಚುನಾವಣೆ ಸಂಬಂಧ ಮೇ 7 ರಂದು ಮತದಾನ ನಡೆಯಲಿದ್ದು, ತಪ್ಪದೇ ಮತ ಚಲಾಯಿಸುವಂತೆ ಮತದಾರರಲ್ಲಿ ಕೋರಿದರು.

ಯಾವುದೇ ಕಾರಣಕ್ಕೂ ಮತದಾನದಿಂದ ಅರ್ಹರು ವಂಚಿತರಾಗಬಾರದು. ಕಡ್ಡಾಯವಾಗಿ ಮತದಾನ ಮಾಡಿ, ಮತದಾನ ಹೆಚ್ಚಳಕ್ಕೆ ಸಹಕರಿಸಬೇಕು ಎಂದು ಸಿ.ಬಿ.ದೇವರಮನಿ ಅವರು ಮನವಿ ಮಾಡಿದರು. ಮನೆ ಮನೆಗೆ ಸ್ಟಿಕರ್ ಅಂಟಿಸುವ ಮೂಲಕ ಮೇ 7 ರಂದು ಮತ ಚಲಾಯಿಸುವಂತೆ ಹಿರಿಯ ನಾಗರಿಕರಲ್ಲಿ ಕೋರಿದರು. ಈ ಸಂದರ್ಭದಲ್ಲಿ ಪ್ರತಿ ಬಡಾವಣೆಗೂ ಬ್ಯಾನರ್ ಅಳವಡಿಸುವ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಲಾಗುವುದು. ಆ ನಿಟ್ಟಿನಲ್ಲಿ ಜಿಲ್ಲಾ ಸ್ವೀಪ್ ಸಮಿತಿ, ನಗರಸಭೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳು ಹೆಚ್ಚಿನ ಅರಿವು ಮೂಡಿಸಲು ಕ್ರಮವಹಿಸಲಾಗುವುದು ಎಂದು ಜಿ.ಪಂ.ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ ತಿಳಿಸಿದರು.

ಜಿಲ್ಲೆಯಲ್ಲಿ ಕಡಿಮೆ ಮತದಾನವಾಗಿರುವ ಮತಗಟ್ಟೆ ವ್ಯಾಪ್ತಿಯಲ್ಲಿ ಹೆಚ್ಚಿನ ಅರಿವು ಮೂಡಿಸಲು ಮತ್ತಷ್ಟು ಶ್ರಮಿಸಲಾಗುವುದು ಎಂದು ಸ್ವೀಪ್ ಸಮಿತಿ ಜಿಲ್ಲಾ ನೋಡಲ್ ಅಧಿಕಾರಿಯವರು ಮಾಹಿತಿ ನೀಡಿದರು.

ಇದೇ ಏಪ್ರಿಲ್ 28 ರಂದು ನಡೆಯುವ ‘ನಮ್ಮ ನಡೆ ಮತಗಟ್ಟೆ ಕಡೆಗೆ’ ಸಂಬಂಧ ಜಾಗೃತಿ ಅಭಿಯಾನ ಹಮ್ಮಿಕೊಳ್ಳುವ ನಿಟ್ಟಿನಲ್ಲಿ ನಗರದ ಬಸವೇಶ್ವರ ವೃತ್ತಕ್ಕೆ ತೆರಳಿ ವೀಕ್ಷಿಸಲಾಯಿತು. ಜಾಥಾ ಮಾರ್ಗ ವೀರನಾರಾಯಣ ದೇವಸ್ಥಾನದ ಬಳಿಯ ಹೆಣ್ಣು ಮಕ್ಕಳ ಶಾಲೆಯಲ್ಲಿ ಮುಖ್ಯಾಪಾಧ್ಯಾಯರ ಜೊತೆಗೆ ಕಾರ್ಯಕ್ರಮ ಆಯೋಜಿಸುವ ಬಗ್ಗೆ ಚರ್ಚಿಸಲಾಯಿತು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರ ಎಂ.ಎ.ರಡ್ಡೇರ ಅವರು ಯುವ ಮತದಾರರ ಜೊತೆ ಮಾತನಾಡಿ ಚುನಾವಣಾ ಗುರುತಿನ ಚೀಟಿ ಇದೆಯೇ? ಮೇ 7 ರಂದು ಕಡ್ಡಾಯವಾಗಿ ಮತದಾನ ಮಾಡಬೇಕು. ಯಾವುದೇ ಕಾರಣಕ್ಕೂ ಮತದಾನ ಮಾಡಲು ಹಿಂಜರಿಕೆ ಬೇಡ. ಹತ್ತಿರದಲಿರುವ ಎಲ್ಲರಿಗೂ ಮತ ಚಲಾಯಿಸಲು ಮಾಹಿತಿ ನೀಡುವಂತಾಗಬೇಕು ಎಂದು ಕೋರಿದರು.

# ಪ್ರತಿಯೊಬ್ಬರ ಒಂದು ಮತವು ಒಂದು ದೊಡ್ಡ ಶಕ್ತಿ



ಗದಗ ಏಪ್ರಿಲ್ 24:– ಪ್ರಜ್ಞಾವಂತರ ಮತದಾನದ ಪ್ರಮಾಣ ಕಡಿಮೆಯಾದರೆ ದೇಶಕ್ಕೆ ಗಂಡಾಂತರ ತಪ್ಪಿದ್ದಲ್ಲ. ಪ್ರಜಾಪ್ರಭುತ್ವದ ತಾಯಿಬೇರಿನಂತಿರುವ ಮತದಾನ ಪ್ರಕ್ರಿ0ƒ?ಯಿಂದ ಪ್ರಜ್ಞಾವಂತರು ದೂರ ಉಳಿಯಬಾರದು ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ ಅವರು ಅಭಿಪ್ರಾಯ ಪಟ್ಟಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಶುಕ್ರವಾರ ಆಯೋಜಿಸಿದ್ದ ಕಾಲ್ನಡಿಗೆ ಜಾಥಾ ಹಾಗೂ ಮನೆ ಮನೆ ಭೇಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗ ತಾಲ್ಲೂಕು ಸ್ವೀಪ್ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಮತದಾರರ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಕಳೆದ ಬಾರಿಯ ಚುನಾವಣೆಯಲ್ಲಿ ಕಡಿಮೆ ಪ್ರಮಾಣದ ಮತದಾನ ಕೇಂದ್ರಗಳಲ್ಲಿ ಕಾಲ್ನೆಡಿಗೆ ಜಾಥಾ ಮೂಲಕ ಬೃಹತ್ ಮಟ್ಟದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಎಂದರು.

ತಾಲೂಕು ಸ್ವಿಪ್ ಸಮಿತಿ ಅಧ್ಯಕ್ಷರಾದ ಮಾಣಿಕರಾವ ಪಾಟೀಲ ಅವರು ಮಾತನಾಡಿ ಕಡಿಮೆ ಮತದಾನವಾದ ಮತಗಟ್ಟೆಗಳ ವ್ಯಾಪ್ತಿಯ ಮನೆ ಮನೆ ಭೇಟಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ. ಈ ಅಭಿಯಾನದ ಅಂಗವಾಗಿ ಈ ಪ್ರದೇಶಗಳಲ್ಲಿ ಈ ಸಾರಿ ನೂರಕ್ಕೆ ನೂರರಷ್ಟು ಮತದಾನವಾಗಬೇಕು. ಅದಕ್ಕಾಗಿ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಕಾಲ್ನಡಿಗೆ ಜಾಥಾ ಹಾಗೂ ಮನೆ ಮನೆ ಭೇಟಿ ನೀಡುವ ಮೂಲಕ ಎಲ್ಲರೂ ತಪ್ಪದೇ ಮತ ನೀಡುವಂತೆ ಜಾಗೃತಿ ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ನಗರದಲ್ಲಿ ಆಯೋಜಿಸಿದ್ದ ಕಾಲ್ನಡಿಗೆ ಜಾಗೃತಿ ಜಾಥಾದಲ್ಲಿ ಮತದಾನದ ಘೋಷಣೆಗಳನ್ನು ಕೂಗುತ್ತಾ ಕಡ್ಡಾಯವಾಗಿ ಮತ ಚಲಾಯಿಸುವಂತೆ ಜಾಗೃತಿ ಮೂಡಿಸಲಾಯಿತು. ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಜಾಥಾ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮತದಾರರನ್ನು ಭೇಟಿ ಮಾಡಿ ಮತದಾನದ ಮಹತ್ವದ ಬಗ್ಗೆ ತಿಳುವಳಿಕೆ ಮೂಡಿಸಿದರು.

ಬೆಟಗೇರಿಯ ಸಿ.ಎಸ್.ಐ ಆಸ್ಪತ್ರೆಯ ಹತ್ತಿರದ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಕಡ್ಡಾಯ ಮತದಾನಕ್ಕೆ ಘೋಷಣೆಗಳ ಮೂಲಕ ಕರೆ ನೀಡಲಾಯಿತು. ಜಾಥಾದಲ್ಲಿ ಭಾಗವಹಿಸಿದ್ದ ಪ್ರತಿಯೊಬ್ಬರೂ ಕೈಯಲ್ಲಿ ಕಡ್ಡಾಯ ಮತದಾನದ ಘೋಷವಾಕ್ಯದ ಪ್ಲೇ ಕಾರ್ಡ್‌ಗಳನ್ನು ಹಿಡಿದು ಪಾಲ್ಗೊಂಡಿದ್ದು ಕಡ್ಡಾಯವಾಗಿ ಮತದಾನ ಮಾಡುವಂತೆ ಸಾರ್ವಜನಕರಿಗೆ ಪ್ರೇರೇಪಿಸುವಂತಿದ್ದವು.

# ಬಸವೇಶ್ವರ ಸೊಸಾಯಿಟಿಗೆ 4.58 ಕೋಟಿ ರೂ ಲಾಭ–ಮಲ್ಲು ಢವಳೇಶ್ವರ



ಮೂಡಲಗಿ: ಬಸವೇಶ್ವರ ಅರ್ಬನ್ ಸೊಸಾಯಿಟಿಯು ಕಳೆದ ಮಾರ್ಚ ಅಂತ್ಯಕ್ಕೆ ಆಡಳಿತ ಮಂಡಳಿ ಮತ್ತು ಸಿಬ್ಬಂದಿವರ್ಗದವರು ಪ್ರಾಮಾಣಿಕ ಸೇವೆ ಹಾಗೂ ಗ್ರಾಹಕ ಸಹಕಾರದಿಂದ 4.58 ಕೋಟಿ ರೂ ಲಾಭವನ್ನು ಗಳಿಸಿ ಪ್ರಗತಿ ಪಥದತ್ತ ಮುನ್ನೆಡಯುತ್ತಲಿದೆ ಎಂದು ಸೊಸಾಯಿಟಿಯ ಅಧ್ಯಕ್ಷ ಮಲ್ಲು ಢವಳೇಶ್ವರ ತಿಳಿಸಿದರು.

ಅವರು ಪಟ್ಟಣದಲ್ಲಿ ಶ್ರೀ ಬಸವೇಶ್ವರ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸಾಯಿಟಿಯ ಸಭಾ ಭವನದಲ್ಲಿ ಸೊಸಾಯಿಟಿ 2023–24ನೇ ಸಾಲೀನ ಪ್ರಗತಿ ಬಗ್ಗೆ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸೊಸಾಯಿಟಿಯು 10800 ಶೇರುದಾರಿಂದ 6.07 ಕೋಟಿ ರೂ ಶೇರು ಬಂಡವಾಳ ಹೊಂದಿ, 207.85 ಕೋಟಿ ರೂ ಠೇವು ಸಂಗ್ರಹಿಸಿ 20 ಕೋಟಿ ರೂ ಕಾಯ್ದಿಟ್ಟ ನಿಧಿಗಳನ್ನು ಹೊಂದಿ ಠೇವುದಾರ ಭದ್ರತೆಗಾಗಿ 61.31 ಕೋಟಿ ರೂ ಗುಂತಾವಣಿಗಳನ್ನು ಮಾಡಿ ಮಾರ್ಚ ಅಂತ್ಯಕ್ಕೆ ಒಟ್ಟು 244.82 ಕೋಟಿ ರೂ ದುಡಿಯುವ ಬಂಡವಾಳ ಹೊಂದಿ ರೈತಾಪಿ ವರ್ಗ, ವ್ಯಾಪಾರಸ್ಥರಿಗೆ ಸೇರಿದಂತೆ ವಿವಿಧ ತೇರನಾದ 158.37 ಕೋಟಿ ರೂ ಸಾಲ ವಿತರಿಸಿ 4.58 ಕೋಟಿ ರೂ ಲಾಭ ಹೊಂದಿದೆ ಎಂದರು. ಸೊಸಾಯಿಟಿಯು ಈಗಾಗಲೆ ಹದಿನೈದು ಶಾಖೆಗಳನ್ನು ಹೊಂದಿ ಎಲ್ಲ ಶಾಖೆಗಳು ಪ್ರಗತಿಯಲ್ಲಿದ್ದು ಮುಂಬರುವ ದಿನಗಳ ಇನ್ನೂ ಐದು ಶಾಖೆಗಳ ಆರಂಭಿಸುವ ಮತ್ತು ಶಾಖೆಗಳ ಸ್ವಂತ ಕಟ್ಟಡ ಹೊಂದಲು ನಿವೇಶ ಖರೀದಿಸುವ ಗುರಿ ಹೊಂದಲಾಗಿದೆ ಎಂದರು.

ಪ್ರಧಾನ ವ್ಯವಸ್ಥಾಪಕ ಬಸವರಾಜ ಬಡಿಗೇರ ಮಾತನಾಡಿ, ಸೊಸಾಯಿಟಿಯ ಗ್ರಾಹಕರು ಸಕಾಲಕ್ಕೆ ವ್ಯವಹಾರ ನಡೆಸಿದರಿಂದ ಶ್ರೀ ಬಸವೇಶ್ವರ ಸೊಸಾಯಿಟಿಯು ಶೇರುದಾರಿರಿಗೆ ಶೇ.15 ಲಾಭಾವಂಶ ವಿತರಿಸಿ ಪ್ರಗತಿ ಪತಥದತ್ತ ಸಾಗುತ್ತಿವೆ ಎಂದರು

ಪತ್ರಿಕಾಗೋಷ್ಠಿಯಲ್ಲಿ ಸೊಸಾಯಿಟಿಯ ಉಪಾಧ್ಯಕ್ಷ ರವೀಂದ್ರ ಬಾಗೋಜಿ, ನಿರ್ದೇಶಕರಾದ ಬಸವರಾಜ ಮ. ತೇಲಿ, ಗಿರೀಶ ಸು.ಢವಳೇಶ್ವರ, ಚನ್ನಬಸು ಭೀ. ಬಡ್ಡಿ, ಶ್ರೀಕಾಂತ ಶಿ.ಹಿರೇಮಠ, ಶ್ರೀಶೈಲ ಯ.ಮದಗಣ್ಣವರ, ದೇವಪ್ಪ ಫ.ಕೌಜಲಗಿ, ಕುಸುಮಾ ಆ.ತೇಲಿ, ಸುಮಿತ್ರಾ ಪ್ರ.ಶೇಡಬಾಳ, ಮಹಾದೇವಿ ಶಂ.ಹಿರೇಮಠ, ಲಕ್ಷ್ಮಣ ಬ.ತೇಳಗಡೆ, ರಾಘವೇಂದ್ರ ಸಿ.ಕೆಸಪನಟ್ಟಿ ಪ್ರಧಾನ ವ್ಯವಸ್ಥಾಪಕ ಬಸವರಾಜ ಬಡಿಗೇರ ಇದ್ದರು.

# ಬಸವ ಯೋಗ ಮಂದಿರದಲ್ಲಿ ಅಕ್ಕಮಹಾದೇವಿ ಜಯಂತಿ ಅಕ್ಕನ ವಚನಗಳು ಮಹಿಳೆಯ ಸುಖ ಜೀವನದ ಸೋಪಾನಗಳು



ಗದಗ–26 : ಇಂದು ಮಹಿಳೆ ಸಾಕಷ್ಟು ಸೌಲಭ್ಯಗಳ ಅನುಕೂಲತೆಯಿಂದ ಐಷಾರಾಮಿ ಜೀವನ ನಡೆಸುತ್ತಿದ್ದರೂ ಆ ಜೀವನದಲ್ಲಿ ಸುಖ, ಶಾಂತಿ, ನೆಮ್ಮದಿಗಳು ಇಲ್ಲದಾಗಿವೆ. ಯಾವದೇ ಹೆಚ್ಚಿನ ಸೌಲಭ್ಯಗಳು ಇಲ್ಲದ ಅಂದಿನ ಕಾಲದಲ್ಲಿ ಅಕ್ಕಮಹಾದೇವಿ ಅನೇಕ ಸಂಕಷ್ಟಗಳನ್ನು ಎದುರಿಸಿ ಶಾಂತಿ, ಸಮಾಧಾನಕರದಿಂದ ಬಾಳಿಬದುಕಿದ್ದಳೆಂಬುದಕ್ಕೆ ಅಕ್ಕಮಹಾದೇವಿಯ ಅನೇಕ ವಚನಗಳು ಸಾಕ್ಷಿಯಾಗಿವೆ. ಒಂದು ವಚನದಲ್ಲಿ ತಿಳಿಸಿರುವಂತೆ ನಡೆ–ನುಡಿ, ತನು–ಮನ, ಭಾವ ಶುದ್ಧವಿದ್ದವರನ್ನು ತೋರಿ ಎನ್ನನು ಬದುಕಿಸಯ್ಯಾ ಎಂದು ಚನ್ನಮಲ್ಲಿಕಾರ್ಜುನನಲ್ಲಿ ಪ್ರಾರ್ಥಿಸಿರುವಂತೆ ಮತ್ತು ಬೆಟ್ಟದ ಮೇಲೆ ಸಮುದ್ರದ ದಂಡೆ, ಸಂತೆಯಲ್ಲಿ ಮನೆ ಮಾಡಿದಾಗ ಸ್ತುತಿ ನಿಂದೆಗಳು ಬಂದಡೆ ಮನದಲ್ಲಿ ಕೋಪವ ತಾಳದೆ ಸಮಾಧಾನಿಯಾಗಿರಬೇಕೆಂದು ಹೇಳಿರುವಂತೆ ಮಹಿಳೆ ಜೀವನ ನಡೆಸಿದ್ದಾದರೆ ಸುಖ ಜೀವನ ಅವರದಾಗುವುದು. ಈ ನಿಟ್ಟಿನಲ್ಲಿ ಶಿವಶರಣೆ ಅಕ್ಕಮಹಾದೇವಿ ವಚನಗಳು ಮಹಿಳೆಯರ ಸುಖ ಜೀವನದ ಸೋಪಾನಗಳಾಗಿವೆ ಎಂದು ನಿವೃತ್ತ ಶಿಕ್ಷಕಿ ಶಾಂತಾ ಕುಂದಗೋಳ ತಿಳಿಸಿರುವರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರವು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಶಿವಶರಣೆ ಅಕ್ಕಮಹಾದೇವಿ ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಶಾಂತಾ ಕುಂದಗೋಳ ಇವರು ಮಹಿಳೆಯರಾದ ನಾವೆಲ್ಲರೂ ಇಂದು ಆಡಂಬರ, ಐಷಾರಾಮಿ ಜೀವನಕ್ಕೆ ಹೆಚ್ಚಿನ ಗಮನ ಕೊಡದೇ ಆದರ್ಶಮಯ, ಸುಖಮಯ, ಸಮಾಧಾನಕರ, ಶಾಂತಿ, ನೆಮ್ಮದಿಯ ಬದುಕಿಗಾಗಿ ಅಕ್ಕನ ತತ್ವಾದರ್ಶಗಳನ್ನು ಪರಿಪಾಲಿಸಬೇಕೆಂದು ಸಭಿಕರಲ್ಲಿ ವಿನಂತಿಸಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಇವರು ಅಕ್ಕಮಹಾದೇವಿ ಅಂದು ಅನುಭವ ಮಂಟಪದಲ್ಲಿ ಶರಣರ ಪ್ರಶ್ನೆಗಳಿಗೆ ಸರಿಯಾದ ಉತ್ತರ ನೀಡಿ ಎಲ್ಲರಿಗೂ ಅಕ್ಕನಾದಂತೆ ಇಂದು ಮಹಿಳೆಯರು ಕೌಟುಂಬಿಕ, ಸಾಮಾಜಿಕ ಜೀವನದಲ್ಲಿ ಎದುರಾಗುವ ಅನ್ಯಾಯ, ಅನೀತಿ, ಅತ್ಯಾಚಾರಗಳನ್ನು ಪ್ರತಿಭಟಿಸುವ ಶಕ್ತಿವಂತರಾಗಬೇಕು. ಅದಕ್ಕಾಗಿ ಅಕ್ಕನ ಜೀವನ ಚರಿತ್ರೆಯನ್ನಲು ಆಧಾರವಾಗಿಟ್ಟುಕೊಳ್ಳಬೇಕೆಂದು ಹೇಳಿದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಮಾಜಿ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಹಿರಿಯ ಸದಸ್ಯೆ ಗಿರಿಜಕ್ಕ ನಾಲತ್ವಾಡಮಠ ಉಪಸ್ಥಿತರಿದ್ದು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ವೀಣಾ ಮಾಲಿಪಾಟೀಲ, ಶಕುಂತಲಾ ಬೆಲ್ಲದ, ಅರುಣಾ ಇಂಗಳಳ್ಳಿ, ಗಿರಿಜಾ ಅಂಗಡಿ, ಪ್ರೇಮಾ ಗಾಣಿಗೇರ, ಶೋಭಾ ಭಾಂಡಗೆ, ಮಹಾದೇವಿ ಚರಂತಿಮಠ ಇನ್ನಿತರೆ ಸದಸ್ಯನಿಯರು ಪಾಲ್ಗೊಂಡಿದ್ದರು.

ಪ್ರಾರಂಭದಲ್ಲಿ ಗೌರಿ ಜಿರಂಕಳಿ ಪ್ರಾರ್ಥನೆ ಹೇಳಿದರು. ವಿಜಯಲಕ್ಷ್ಮೀ ಮೇಕಳಿ ಸ್ವಾಗತ ಕೋರಿದರು, ಕಾರ್ಯದರ್ಶಿ ಸುಲೋಚನಾ ಐಹೊಳ್ಳಿ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಸಾಮೂಹಿಕವಾಗಿ ಸದಸ್ಯನರೆಲ್ಲ ಸೇರಿ ವಚನ ಮಂಗಲ ಹೇಳಿದರು.

## ಲೋಕಸಭಾ ಸಾರ್ವತ್ರಿಕ ಚುನಾವಣೆ ಮದ್ಯ ಮಾರಾಟದ ವಹಿವಾಟಿನ ಶುಷ್ಕ ದಿನ ಘೋಷಣೆ

ಗದಗ ಏಪ್ರಿಲ್ 26:– ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಮೇ 7 ರಂದು ಮತದಾನ ನಡೆಯಲಿದೆ.

ಈ ಹಿನ್ನೆಲೆ ಚುನಾವಣೆಯ ಮತ ಎಣಿಕೆಯು ಜೂನ್ 4 ರಂದು ಜರುಗಲಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾನ ಪೂರ್ಣಗೊಳ್ಳುವ 48 ಗಂಟೆಗಳ ಅವಧಿಯಲ್ಲಿ ಅಂದರೆ ಮೇ 5 ರಂದು ಸಂಜೆ 6 ಗಂಟೆಯಿಂದ ಮೇ 8 ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ ಚುನಾವಣಾ ಫಲಿತಾಂಶದ ದಿನದಂದು ಜೂನ್ 4 ರಂದು ಬೆಳಿಗ್ಗೆ 6 ಗಂಟೆಯಿಂದ ಜೂನ್ 5 ರ ಬೆಳಿಗ್ಗೆ 6 ಗಂಟೆಯವರೆಗೆ ಶುಷ್ಕ ದಿನಗಳೆಂದು ಘೋಷಿಸಲಾಗಿದೆ.

ಈ ದಿನಗಳಂದು ಚುನಾವಣೆ ಪ್ರಕ್ರಿಯೆಯ ಪರಿಶುದ್ಧತೆ , ಶಿಸ್ತು ಮತ್ತು ಶಾಂತಿಯನ್ನು ಕಾಪಾಡುವುದ್ಕಾಗಿ ಗದಗ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ 65 – ಶಿರಹಟ್ಟಿ (ಎಸ್‌ಸಿ), 66– ಗದಗ ಮತ್ತು 67– ರೋಣ ಮತ್ತು 68– ನರಗುಂದ ಮತಕ್ಷೇತ್ರಗಳಲ್ಲಿ ಮದ್ಯ ಮಾರಾಟ ನಿರ್ಬಂಧಿಸಿ ಮದ್ಯ ವಹಿವಾಟಿನ ಶುಷ್ಕ ದಿನವೆಂದು ಘೋಷಿಸಲಾಗಿದೆ.

ಈ ಅವಧಿಯಲ್ಲಿ ಮದ್ಯ ಮಾರಾಟ, ಮದ್ಯದ ಅಂಗಡಿಗಳು, ಬಿಯರ್ ಬಾರುಗಳು, ಕ್ಲಬ್‌ಗಳು ಮತ್ತು ಕೆಎಸ್‌ಬಿಸಿಎಲ್ ಮದ್ಯ ಡಿಪೋಗಳನ್ನು ಮುಚ್ಚತಕ್ಕದ್ದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆದೇಶಿಸಿದ್ದಾರೆ.

## ಏ.29 ರಂದು ಮತದಾನ ಜಾಗೃತಿ ಅಂಗವಾಗಿ ಬೈಕ್ ಜಾಥ

ಬಳ್ಳಾರಿ,ಏ.26:ಲೋಕಸಭಾ ಚುನಾವಣೆ 2024ರ ಅಂಗವಾಗಿ ಬಳ್ಳಾರಿ ನಗರದಲ್ಲಿ ಕಡಿಮೆ ಮತದಾನವಾದ ಮತಗಟ್ಟೆ ಕೇಂದ್ರಗಳ ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಏ.29 ರಂದು ಸಂಜೆ 04.30 ಗಂಟೆಗೆ ಬೈಕ್ ಜಾಥಾ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದ್ದಾರೆ.

ಜಾಥಾವು ನಗರದ ಹೊಸ ಜಿಲ್ಲಾಧಿಕಾರಿಗಳ ಕಚೇರಿಯಿಂದ ಆರಂಭಗೊಂಡು ತೇರುಬೀದಿ, ಹೆಚ್.ಆರ್.ಗವಿಯಪ್ಪ ವೃತ್ತ (ಮೋತಿ ಸರ್ಕಲ್), ಕೌಲ್ ಬಜಾರ್, ಸುಧಾಕ್ರಾಸ್, ದುರುಗಮ್ಮ ದೇವಸ್ಥಾನ, ಮೋಕಾ ರಸ್ತೆ, ಎಸ್.ಎನ್.ಪೇಟೆ, ಸಂಗಮ್ ವೃತ್ತದಿಂದ ಮರಳಿ ಹೊಸ ಜಿಲ್ಲಾಧಿಕಾರಿಗಳ ಕಚೇರಿಗೆ ಬಂದು ಅಂತಿಮಗೊಳ್ಳಲಿದೆ.

ಜಾಥಾದಲ್ಲಿ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ತಪ್ಪದೇ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅವರು ತಿಳಿಸಿದ್ದಾರೆ.

# ಮತದಾನ ದಿನದಂದು ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗಾಗಿ ಕಲ್ಪಿಸಲಾಗುತ್ತಿರುವ ಸೌಲಭ್ಯಗಳು

ಗದಗ (ಏಪ್ರಿಲ್ 26: ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಮೇ 7 ರಂದು ಮತದಾನ ಜರುಗಲಿದ್ದು ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಸುಗಮವಾಗಿ ಮತದಾನ ಮಾಡಲು ಅಗತ್ಯ ವ್ಯವಸ್ಥೆ ಕಲ್ಪಿಸಲಾಗುವುದು.

ಅರ್ಹ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಮತದಾನದಿಂದ ಹೊರಗುಳಿಯದೇ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಅವರು ಕೋರಿದ್ದಾರೆ. ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗಾಗಿ ಕಲ್ಪಿಸಲಾಗಿರುವ ಸೌಲಭ್ಯಗಳು: ಗಾಲಿ ಕುರ್ಚಿಗಳು, ಮತಗಟ್ಟೆಯಲ್ಲಿ ಇಳಿಜಾರು ಮತ್ತು ರೈಲಿಂಗ್ಸ್, ಮತಯಂತ್ರದಲ್ಲಿ ಬ್ರೈಲ್ ಲಿಪಿ, ಮತಗಟ್ಟೆಗೆ ಬರಲು ಸಾರಿಗೆ ವ್ಯವಸ್ಥೆ, ತರಬೇತಿ ಪಡೆದ ಸ್ವಯಂ ಸೇವಕರು, ಸನ್ನೆ ಸೂಚನಾಫಲಕಗಳು,ವಿಕಲಚೇತನ ಸ್ನೇಹಿ ಶೌಚಾಲಯ, ಮತದಾನಕ್ಕಾಗಿ ಪ್ರತ್ಯೇಕ ಸಾಲಿನ ವ್ಯವಸ್ಥೆ, ಭೂತ ಕನ್ನಡಿ, ಕುಡಿಯುವ ನೀರಿನ ವ್ಯವಸ್ಥೆ, ಪ್ರಥಮ ಚಿಕಿತ್ಸಾ ಪೆಟ್ಟಿಗೆ, ವಿಕಲಚೇತನರಿಗೆ ಪ್ರತ್ಯೇಕ ವಾಹನ ನಿಲ್ದಾಣ ವ್ಯವಸ್ಥೆ, ಅಂಧ ಮತದಾರರಿಗೆ ಒಬ್ಬರು ಸಹಾಯಕರ ವ್ಯವಸ್ಥೆ, ಮನೆಯಿಂದಲೇ ಮತದಾನ ಮಾಡುವ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ತೀವ್ರತರನಾದ ವಿಕಲಚೇತನರಿಗೆ ಬ್ಯಾಲಿಟ್ ಪೇಪರ್ ವ್ಯವಸ್ಥೆ, ಮತದಾನದ ಕುರಿತು ಮಾಹಿತಿ ಪಡೆಯಲು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಪ್ರತ್ಯೇಕ ಸಹಾಯವಾಣಿ ಕೇಂದ್ರ, ವಿಕಲಚೇತನರ ಆಪ್, ವೋಟರ್ ಹೆಲ್ಪಲೈನ್, ಶ್ರವಣದೋಷ ಮತದಾರರಿಗೆ ಸನ್ನೆ ಭಾಷೆಯಲ್ಲಿ ಮಾಹಿತಿ ಮತ್ತಿತರ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.